ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಸಂಖ್ಯೆ:ಪಪೂಶಿಇ/ಶೈಶಾ/ವಿಪ್ರಶೋ/2021-22 ದಿನಾಂಕ: 02-11-2021

## ಜ್ಞಾಪನ

ವಿಷಯ: 2021-22 ನೇ ಸಾಲಿನ "ವಿಜ್ಞಾನ ಪ್ರತಿಭಾ ಶೋಧನೆ" ಯೋಜನೆಯ ಅನುಷ್ಠಾನಕ್ಕೆ ಅಗತ್ಯ ನೆರವು ಒದಗಿಸಲು ಕೋರಿರುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ವಿಜ್ಞಾನ ಭವನ, ನಂ24/2, 3ನೇ ಮಹಡಿ, 2ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು-560070 ಇವರ ಪತ್ರ ಸಂಖ್ಯೆ: ಡಿಎಸ್‌ಟಿ/ಕೆಸ್ಟೆಪ್ಸ್/ವಿಪ್ರಶೋ/2021-22 ದಿನಾಂಕ: 30-09-2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22 ನೇ ಸಾಲಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಹೊಸ ಯೋಜನೆಯಾಗಿ ವಿಜ್ಞಾನ ಪ್ರತಿಭಾ ಶೋಧನೆ" ಕಾರ್ಯಕ್ರಮ ಪ್ರಾರಂಭಗೊಂಡಿದ್ದು, ಈ ಯೋಜನೆಯು ರಾಜ್ಯದ ಪ್ರತಿಭಾನ್ವಿತ ಪದವಿ ಪೂರ್ವ ವಿದ್ಯಾರ್ಥಿಗಳನ್ನು ಗುರುತಿಸಿ ಪೋಷಿಸುವ ಉದ್ದೇಶ ಹೊಂದಿದೆ

ಈ ಸಂಬಂಧ 2021-22 ನೇ ಶೈಕ್ಷಣಿಕ ಸಾಲಿಗೆ ಈ ಯೋಜನೆಯಡಿ ಪ್ರತಿ ಶೈಕ್ಷಣಿಕ ಜಿಲ್ಲೆಗಳ ತಲಾ 10 ವಿದ್ಯಾರ್ಥಿಗಳಂತೆ ರಾಜ್ಯದಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ಪೂರ್ವ ಶಿಕ್ಷಣಕ್ಕೆ ವಿಜ್ಞಾನ ವಿಭಾಗಕ್ಕೆ ದಾಖಲಾದ ಒಟ್ಟು 320 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಮಾಸಿಕ ರೂ.1000/- ಗಳ ಶಿಷ್ಯವೇತನವನ್ನು ನೀಡುವುದರೊಂದಿಗೆ ವಿಜ್ಞಾನ ವಿಷಯದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನವನ್ನು ಸಹ ಒದಗಿಸಲು ಉದ್ದೇಶಿಸಲಾಗಿದೆ.

ಈ ನಿಟ್ಟಿನಲ್ಲಿ ಉಲ್ಲೇಖಿತ ಪತ್ರದಲ್ಲಿ ಪ್ರಸ್ತುತ ಸಾಲಿನ ಶೈಕ್ಷಣಿಕ ಜಿಲ್ಲಾವಾರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ಪೂರ್ವ ವಿಜ್ಞಾನ ವಿಭಾಗಕ್ಕೆ ದಾಖಲಾದ ಟಾಪ್ 20 ವಿದ್ಯಾರ್ಥಿಗಳ ಪಟ್ಟಿಯನ್ನು ಅವರು ಪಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೆರಿಟ್ ಆಧಾರದ ಮೇಲೆ ಒದಗಿಸಲು ಕೋರಿರುತ್ತಾರೆ.

ಸದರಿ ವಿಷಯಕ್ಕೆ ಸಂಬಂಧಿಸದಂತೆ ವಿದ್ಯಾರ್ಥಿಗಳ ಪಟ್ಟಿ ಪಡೆಯಲು ಗೂಗಲ್ ಸ್ಪ್ರೆಡ್ ಶೀಟ್‌ನ್ನು ಜಿಲ್ಲಾ ಉಪ ನಿರ್ದೇಶಕರ ಇ_ಮೇಲ್‌ಗೆ ಈಗಾಗಲೇ ಕಳುಹಿಸಲಾಗಿದ್ದು, ತುರ್ತಾಗಿ ವಿದ್ಯಾರ್ಥಿಗಳ ಮಾಹಿತಿಯನ್ನು 15 ದಿನದೊಳಗಾಗಿ ಗೂಗಲ್ ಸ್ಪ್ರೆಡ್ ಶೀಟ್‌ನಲ್ಲಿ ಸಲ್ಲಿಸಲು ಸೂಚಿಸಿದೆ.

02/11/21

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
2. ನಿರ್ದೇಶಕರು (ತಾಂತ್ರಿಕ) ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ವಿಜ್ಞಾನ ಭವನ, ನಂ24/2, 3ನೇ ಮಹಡಿ, 2ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು-560070.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಜಿಲ್ಲಾ ಉಪ ನಿದೇಶಕರುಗಳ ಇ- ಮೇಲ್ಗೆ ಅಳವಡಿಸಲು.
4. ಕಚೇರಿ ಪ್ರತಿ.